ವಿಜಯಪುರ

# ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ.,

ವಿಜಯಪುರ ಡೈರಿ ಆವರಣ, ಭೂತನಾಳ, ವಿಜಯಪುರ-586103.

ಸಂಖ್ಯೆ ವಿಹಾಒ/ಆಡಳಿತ/ನೇಮಕಾತಿ/2022-23/4215 ದಿನಾಂಕ: 21/03/2023.

## ನೇಮಕಾತಿ ಪ್ರಕಟಣೆ

**ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ವಿಜಯಪುರ (ವಿಮೂಲ್)** ಇದರಲ್ಲಿ ವಿವಿಧ ವೃಂದದಲ್ಲಿ ಖಾಲಿ ಇರುವ ಒಟ್ಟು 40 ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಪ್ರಾರಂಭದ ದಿನಾಂಕ: 24/03/2023 ಮತ್ತು ಕೊನೆಯ ದಿನಾಂಕ: 25/04/2023 ಆಗಿರುತ್ತದೆ. ಖುದ್ದಾಗಿ / ಅಂಚೆ /ಕೋರಿಯರ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶವಿಲ್ಲವೆಂದು ಈ ಮೂಲಕ ಸ್ಪಷ್ಟಪಡಿಸಲಾಗಿದೆ. ನೇರ ನೇಮಕಾತಿಗೆ ಪ್ರಕಟಣೆ ಹೊರಡಿಸಲಾಗಿರುವ ಹುದ್ದೆಗಳ ವಿವರ/ಮಿಸಲಾತಿ ಈ ಕೆಳಕಂಡಂತೆ ಇರುತ್ತದೆ.

| ಕ್ರಸಂ | ಹುದ್ದೆಯ ವಿವರ | ವೇತನ ಶ್ರೇಣಿ (ರೂ.) | ಒಟ್ಟು ಹುದ್ದೆಗಳ ಸಂಖ್ಯೆ | ಒಳ ಮೀಸಲಾತಿ | | | | | |
|---|---|---|---|---|---|---|---|---|---|
| | | | | ಪ.ಜಾ | ಪ.ಪಂ | ಪ್ರ-1 | 2ಎ | 2ಬಿ | ಸಾ |
| 01 | ಸಹಾಯಕ ವ್ಯವಸ್ಥಾಪಕರು (ಎ.ಹೆಚ್.& ಎ.ಐ) | 52650-97100 | 06 | 01 (ಇ) | 01 (ಇ) | 01 (ಇ) | – | – | 01 (ಇ)<br>01 (ಮ)<br>01 (ಗ್ರಾ) |
| 02 | ತಾಂತ್ರಿಕ ಅಧಿಕಾರಿ ( ಡಿಟಿ/ಕ್ಯೂಸಿ) | 43100-83900 | 02 | 01 (ಇ) | – | – | – | – | 01 (ಇ) |
| 03 | **ವಿಸ್ತರಣಾಧಿಕಾರಿ ದರ್ಜೆ -3** | | **08** | | | | | | |
| | ಅ) ಅನ್ಯ / ಇತರೆ ಅಭ್ಯರ್ಥಿಗಳಿಗೆ | 33450-62600 | 07 | 01 (ಇ) | 01 (ಇ) | 01 (ಇ) | 01 (ಇ) | – | 01 (ಮ)<br>01 (ಗ್ರಾ)<br>01 (ಅಂ.ವಿ) |
| | ಬ) ವಿಮೂಲ್ ವ್ಯಾಪ್ತಿಯ ಹಾಲು ಉತ್ಪಾದಕರ ಸಂಘದ ಸಿಬ್ಬಂದಿಗಳಿಗೆ | 33450-62600 | 01 | – | – | – | – | – | 01 (ಇ) |
| 04 | ಕೆಮಿಸ್ಟ್ ದರ್ಜೆ-2 | 27650-52650 | 03 | 01 (ಇ) | 01 (ಇ) | | | | 01 (ಇ) |
| 05 | ಕಿರಿಯ ಸಿಸ್ಟಂ ಆಫರೇಟರ್ | 27650-52650 | 03 | – | – | 01 (ಇ) | – | – | 01 (ಮ)<br>01 (ಅಂ.ವಿ) |
| 06 | ಆಡಳಿತ ಸಹಾಯಕ ದರ್ಜೆ-2 | 27650-52650 | 02 | – | – | 01 (ಇ) | – | – | 01 (ಮ) |
| 07 | ಮಾರುಕಟ್ಟೆ ಸಹಾಯಕರು ದರ್ಜೆ -2 | 27650-52650 | 02 | 01 (ಮ) | – | – | – | – | 01 (ಗ್ರಾ) |
| 08 | **ಕಿರಿಯ ತಾಂತ್ರಿಕ** | | **08** | | | | | | |
| | – ಬಾಯ್ಲರ್ ಅಟೆಂಡೆಂಟ್ | 21400-42000 | 02 | 01 (ಮ) | – | – | – | – | 01 (ಮ) |
| | – ಇಲ್ಕ್ಟ್ರೀಷಿಯನ್ | 21400-42000 | 02 | – | 01 (ಇ) | – | – | – | 01 (ಇ) |
| | – ರೆಫ್ರೀಜಿರೆಷನ್ | 21400-42000 | 02 | – | – | 01 (ಮ) | – | – | 01 (ಗ್ರಾ) |
| | – ಫಿಟ್ಟರ್ | 21400-42000 | 02 | – | – | – | 01 (ಇ) | – | 01 (ಇ) |
| 09 | ಹಾಲು ರವಾನೆಗಾರರು | 21400-42000 | 06 | | | | | | |
| | ಅ) ಅನ್ಯ / ಇತರೆ ಅಭ್ಯರ್ಥಿಗಳಿಗೆ | 21400-42000 | 05 | 01 (ಇ) | – | – | 01 (ಮ ) | 01 (ಇ) | 01 (ಅಂ.ವಿ)<br>01 (ಇ) |
| | ಬ) ವಿಮೂಲ್ ವ್ಯಾಪ್ತಿಯ ಹಾಲು ಉತ್ಪಾದಕರ ಸಂಘದ ಸಿಬ್ಬಂದಿಗಳಿಗೆ | 21400-42000 | 01 | – | – | – | – | – | 01 (ಗ್ರಾ) |
| | **ಒಟ್ಟು** | | **40** | | | | | | |

ಒಳ ಮಿಸಲಾತಿಗೆ ಸಂಬಂಧಿಸಿದಂತೆ ಮೇಲಿನ ಅಂಕಣದಲ್ಲಿ ನಮೂದಿಸಿರುವ ಮೀಸಲಾತಿ ವಿವರಣೆಗಳನ್ನು ಈ ಕೆಳಕಂಡಂತೆ ಅರ್ಥೈಸಿಕೊಳ್ಳುವುದು.

| | | | |
|---|---|---|---|
| **ಪ.ಜಾ.** | ಪರಿಶಿಷ್ಠ ಜಾತಿ | **ಸಾ** | ಸಾಮಾನ್ಯ |
| **ಪ.ಪಂ.** | ಪರಿಶಿಷ್ಠ ಪಂಗಡ | **ಮ** | ಮಹಿಳಾ ಅಭ್ಯರ್ಥಿ |
| **ಪ್ರ.–1** | ಪ್ರವರ್ಗ 1 | **ಅಂ.ವಿ** | ಅಂಗವಿಕಲ ಅಭ್ಯರ್ಥಿ |
| **2ಎ** | ಪ್ರವರ್ಗ 2ಎ | **ಗ್ರಾ** | ಗ್ರಾಮೀಣ ಅಭ್ಯರ್ಥಿ |
| **2ಬಿ** | ಪ್ರವರ್ಗ 2ಬಿ | **ಇ** | ಇತರೆ ಅಭ್ಯರ್ಥಿ |

ಮಹಿಳೆ/ ಅಂ.ವಿ/ ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ರಿಕ್ತ ಸ್ಥಾನಗಳಿಗೆ ಅರ್ಹ ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ ಅಂತಹ ರಿಕ್ತ ಸ್ಥಾನಗಳನ್ನು ಆಯಾ ವರ್ಗಕ್ಕೆ ಸೇರಿದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.

**ಪದವಿ :** ಪದವಿ ಎಂದರೆ ಅಭ್ಯರ್ಥಿಯು 10+2 ವಿದ್ಯಾಭ್ಯಾಸದ ನಂತರ ಭಾರತದಲ್ಲಿ ಕಾನೂನು ರೀತ್ಯಾ ಸ್ಥಾಪಿತವಾಗಿರುವ ಯಾವುದೇ ಅಂಗೀಕೃತ ವಿಶ್ವವಿದ್ಯಾಲಯದಿಂದ ನಿಯತವಾಗಿ ವ್ಯಾಸಂಗ ಮಾಡಿ ಪಡೆದ ಕನಿಷ್ಠ ಮೂರು ವರ್ಷಗಳ ಅವಧಿಯ ಸಾಂಪ್ರದಾಯಿಕ ಪದವಿ (10+2+3 ಅಥವಾ 4).

**ಐ.ಟಿ.ಐ./ಬಾಯ್ಲರ್ ಅಟೆಂಡೆಂಟ್:** ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯಿಂದ ಎಸ್.ಎಸ್.ಎಲ್.ಸಿ ಉತ್ತೀರ್ಣತೆಯ ನಂತರ ಕರ್ನಾಟಕ ಸರ್ಕಾರದಿಂದ ಅಂಗೀಕೃತಗೊಂಡ ಉದ್ಯೋಗ ಮತ್ತು ಕೈಗಾರಿಕಾ ತರಬೇತಿ ಇಲಾಖೆ (SCVT / NCVT)/ ಸಂಸ್ಥೆಯಿಂದ ಇಲೇಕ್ಟ್ರೀಷಿಯನ್/ರೆಫ್ರೀಜಿರೇಷನ್/ಫಿಟ್ಟರ್ ಇದರಲ್ಲಿ ಐ.ಟಿ.ಐ. ಸರ್ಟಿಫಿಕೇಟ್ ಹೊಂದಿರಬೇಕು. ಕರ್ನಾಟಕ ಸರ್ಕಾರದ ಬಾಯ್ಲರ್ ಅಟೆಂಡೆಂಟ್ ಪರೀಕ್ಷಾ ಮಂಡಳಿಯಿಂದ ಪಡೆದ ಬಾಯ್ಲರ್ ಅಟೆಂಡೆಂಟ್ ಸರ್ಟಿಫಿಕೇಟ್ ಹೊಂದಿರಬೇಕು.

**1) ಕನಿಷ್ಠ ವಿದ್ಯಾರ್ಹತೆ:**

ಅರ್ಜಿಗಳನ್ನು ಭರ್ತಿ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಈ ಕೆಳಕಂಡ ಆಯಾ ಹುದ್ದೆಗಳ ಮುಂದೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು.

| ಅ.ನಂ. | ಹುದ್ದೆ | ವಿದ್ಯಾರ್ಹತೆ |
|---|---|---|
| 01 | ಸಹಾಯಕ ವ್ಯವಸ್ಥಾಪಕರು (ಎ.ಹೆಚ್.& ಎಐ) | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ B.VSc. ಪದವಿ ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. ಕಹಾಮ ಮತ್ತು ಇದರ ಹಾಲು ಒಕ್ಕೂಟಗಳಲ್ಲಿ ಪಶು ವೈದ್ಯಕೀಯ ಸಮಾಲೋಚಕರಾಗಿ ಕನಿಷ್ಠ 3 ವರ್ಷ ತೃಪ್ತಿಕರ ಸೇವೆ ಸಲ್ಲಿಸಿದವರಿಗೆ ಆದ್ಯತೆ ನೀಡಲಾಗುವುದು. |
| 02 | ತಾಂತ್ರಿಕ ಅಧಿಕಾರಿ (ಡಿಟಿ/ಕ್ಯೂಸಿ) | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ B.Sc. (DT) ಅಥವಾ B.Tech(DT) ಪದವಿ ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| 03 | ವಿಸ್ತರಣಾಧಿಕಾರಿ ದರ್ಜೆ –3 | ಅ) ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದೇ ಪದವಿಯ ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| | | ಬ) ಮೇಲಿನ ವಿದ್ಯಾರ್ಹತೆಯ ಜೊತೆಗೆ ವಿಮೂಲ್ ವ್ಯಾಪ್ತಿಯ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಕಾರ್ಯನಿರ್ವಾಹಕರಾಗಿ /ಕಾರ್ಯದರ್ಶಿಯಾಗಿ ಅಥವಾ ಹಾಲು ಪರೀಕ್ಷಕರಾಗಿ ಪ್ರಸ್ತುತ ಸೇವೆ ಸಲ್ಲಿಸುತ್ತಿದ್ದು, ಕನಿಷ್ಠ 5 ವರ್ಷ ನಿರಂತರವಾಗಿ ಸೇವೆ ಸಲ್ಲಿಸಿದವರಾಗಿರಬೇಕು. |
| 04 | ಮಾರುಕಟ್ಟೆ ಸಹಾಯಕರು ದರ್ಜೆ –2 | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ B.Com/ BBA ಪದವಿ ಹೊಂದಿರಬೇಕು. ಜೊತೆಗೆ Tally ಪ್ರಮಾಣ ಪತ್ರ ಮತ್ತು MS Office Package ಜ್ಞಾನ ಹೊಂದಿರಬೇಕು. |
| 05 | ಕಿರಿಯ ಸಿಸ್ಟಂ ಆಪರೇಟರ್ | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ B.Sc (Computer Science / Comp. Applicaton) ಅಥವಾ B.C.A. ಪದವಿ ಹೊಂದಿರಬೇಕು. |

| | | |
|---|---|---|
| 06 | ಆಡಳಿತ ಸಹಾಯಕ ದರ್ಜೆ-2 | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಯಾವುದೇ ಪದವಿ ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| 07 | ಕೆಮಿಸ್ಟ್ ದರ್ಜೆ-2 | ಮಾನ್ಯತೆ ಪಡೆದ ವಿಶ್ವವಿದ್ಯಾಲಯದಿಂದ ಕೆಮಿಸ್ಟ್ರಿ ಅಥವಾ ಮೈಕ್ರೋಬೈಯಾಲಾಜಿಯನ್ನು ಒಂದು ಐಚ್ಛಿಕ ವಿಷಯವಾಗಿ B.Sc. ಪದವಿಯನ್ನು ಹೊಂದಿರಬೇಕು. ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| 08 | ಕಿರಿಯ ತಾಂತ್ರಿಕ | |
| | – ಬಾಯ್ಲರ್ ಅಂಟೆಂಡೆಂಟ್ | ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಕರ್ನಾಟಕ ಸರ್ಕಾರದ ಬಾಯ್ಲರ್ ಅಟೆಂಡೆಂಟ್ ಪರೀಕ್ಷಾ ಮಂಡಳಿಯಿಂದ ಪಡೆದ ಬಾಯ್ಲರ್ ಅಟೆಂಡೆಂಟ್ ಸರ್ಟಿಫಿಕೆಟ್ (Boiler Attendent Certificate) ಹೊಂದಿರಬೇಕು. First Class Boiler Attendent Certificate ಹೊಂದಿದವರಿಗೆ ಆದ್ಯತೆ ನೀಡಲಾಗುವುದು. |
| | – ಇಲೇಕ್ಟ್ರೀಷಿಯನ್ | ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಕರ್ನಾಟಕ ಸರ್ಕಾರದಿಂದ ಅಂಗೀಕೃತಗೊಂಡ ಉದ್ಯೋಗ ಮತ್ತು ಕೈಗಾರಿಕಾ ತರಬೇತಿ ಇಲಾಖೆ (SCVT / NCVT) / ಸಂಸ್ಥೆಯಿಂದ ITI ನಲ್ಲಿ Electrical Trade Certificate ಹೊಂದಿರಬೇಕು. ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| | – ರೆಫ್ರೀಜಿರೇಷನ್ | ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಕರ್ನಾಟಕ ಸರ್ಕಾರದಿಂದ ಅಂಗೀಕೃತಗೊಂಡ ಉದ್ಯೋಗ ಮತ್ತು ಕೈಗಾರಿಕಾ ತರಬೇತಿ ಇಲಾಖೆ (SCVT / NCVT)/ ಸಂಸ್ಥೆಯಿಂದ ITI ನಲ್ಲಿ Refreigeration Trade Certificate ಹೊಂದಿರಬೇಕು. ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| | – ಫಿಟ್ಟರ್ | ಎಸ್.ಎಸ್.ಎಲ್.ಸಿ. ಉತ್ತೀರ್ಣತೆ ಜೊತೆಗೆ ಕರ್ನಾಟಕ ಸರ್ಕಾರದಿಂದ ಅಂಗೀಕೃತಗೊಂಡ ಉದ್ಯೋಗ ಮತ್ತು ಕೈಗಾರಿಕಾ ತರಬೇತಿ ಇಲಾಖೆ (SCVT / NCVT)/ ಸಂಸ್ಥೆಯಿಂದ ITI ನಲ್ಲಿ Fitter Trade Certificate ಹೊಂದಿರಬೇಕು. ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| 09 | ಹಾಲು ರವಾನೆಗಾರರು | ಅ) ಕನಿಷ್ಠ ಎಸ್.ಎಸ್.ಎಲ್.ಸಿ. ಪಾಸಾಗಿರಬೇಕು ಜೊತೆಗೆ ಗಣಕಯಂತ್ರದ ನಿರ್ವಹಣೆ ಜ್ಞಾನ ಹೊಂದಿರಬೇಕು. |
| | | ಬ) ಮೇಲಿನ ವಿದ್ಯಾರ್ಹತೆಯ ಜೊತೆಗೆ ವಿಮೂಲ್ ವ್ಯಾಪ್ತಿಯ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಕಾರ್ಯನಿರ್ವಾಹಕರಾಗಿ /ಕಾರ್ಯದರ್ಶಿಯಾಗಿ ಅಥವಾ ಹಾಲು ಪರೀಕ್ಷಕರಾಗಿ ಪ್ರಸ್ತುತ ಸೇವೆ ಸಲ್ಲಿಸುತ್ತಿದ್ದು, ಕನಿಷ್ಠ 5 ವರ್ಷ ನಿರಂತರವಾಗಿ ಸೇವೆ ಸಲ್ಲಿಸದವರಾಗಿರಬೇಕು. |

**2. ವಯೋಮಿತಿ:**

ನೇಮಕಾತಿ ಅರ್ಜಿಗಳನ್ನು ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕಕ್ಕೆ ಅಭ್ಯರ್ಥಿಗಳ ಕನಿಷ್ಠ/ಗರಿಷ್ಠ ವಯೋಮಿತಿ ಈ ಕೆಳಕಂಡಂತೆ ಇರತಕ್ಕದ್ದು.

| ವರ್ಗೀಕರಣದ ವಿವರ | ಕನಿಷ್ಠ | ಗರಿಷ್ಠ |
|---|---|---|
| ಸಾಮಾನ್ಯ ವರ್ಗ | 18 | 35 |
| 2ಎ, 2ಬಿ, 3ಎ, 3ಬಿ | 18 | 38 |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 | 18 | 40 |

**ವಯೋಮಿತಿ ಸಡಿಲಿಕೆ :**

ಅಂಗವಿಕಲರು/ವಿಧವೆಯರಿಗೆ 10 ವರ್ಷವಯೋಮಿತಿ ಸಡಿಲಿಕೆ ಇರುತ್ತದೆ. ವಿಧವೆಯರಿಗೆ 10 ವರ್ಷಗಳ ವಯೋಮಿತಿ ಸಡಿಲಿಕೆ ಪರಿಗಣಿಸಲು, ಅಭ್ಯರ್ಥಿಯು ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂದು ಪ್ರಮಾಣ ಪತ್ರವನ್ನು ತಹಶೀಲ್ದಾರವರಿಂದ ಪಡೆದುಕೊಂಡು ಇದರ ಝರಾಕ್ಸ್ ಪ್ರತಿಯನ್ನು ಅಪ್‌ಲೋಡ್ ಮಾಡುವುದು, ಅರ್ಹರಾದಲ್ಲಿ ಒಕ್ಕೂಟವು ಸೂಚಿಸಿದಾಗ ಇದರ ಮೂಲ ಪ್ರತಿಯನ್ನು ಪರಿಶೀಲನೆಗೆ ಹಾಜರುಪಡಿಸಬೇಕು.

ಮಾಜಿ ಸೈನಿಕರಿಗೆ ಮಿಲಿಟರಿ ಸೇವೆಯಲ್ಲಿ ಸಲ್ಲಿಸಿದ ಅವಧಿಗೆ ವಯೋಮಿತಿ ಸಡಿಲಿಕೆ ಇರುತ್ತದೆ.

**3 ಅರ್ಜಿ ಶುಲ್ಕ**

| | |
|---|---|
| ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–1 ಹಾಗೂ ಅಂಗವಿಕಲ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | ಅರ್ಜಿ ಶುಲ್ಕ ರೂ. 500/– (ಬ್ಯಾಂಕ್ ಶುಲ್ಕ ಪ್ರತ್ಯೇಕ) |
| ಇತರೆ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | ಅರ್ಜಿ ಶುಲ್ಕ ರೂ. 1000/– (ಬ್ಯಾಂಕ್ ಶುಲ್ಕ ಪ್ರತ್ಯೇಕ) |

**4. ಆಯ್ಕೆ ವಿಧಾನ:**

ಅನ್ ಲೈನ್ ಮೂಲಕ ಸಲ್ಲಿಸಲಾದ ಅರ್ಜಿಗಳನ್ನು ಹುದ್ದೆಗೆ ನಿಗಧಿಪಡಿಸಿದ ವಿದ್ಯಾರ್ಹತೆ ಹಾಗೂ ಅಗತ್ಯ ದಾಖಲೆಗಳ ಆಧಾರದ ಮೇಲೆ ಪರಿಶೀಲಿಸಿ ಮೆಲ್ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್‌ಸಿಎಸ್/ಆರ್‌ಎಸ್‌ಆರ್/ಎಕ್ಸ್‌ಎಂಪಿ/41/2020–21 ದಿನಾಂಕ: 16/09/2020 ರನ್ವಯ ಬಾಹ್ಯ ಮೂಲ ಒಂದು ಸಂಸ್ಥೆಯಿಂದ ಲಿಖಿತ ಪರೀಕ್ಷೆ ನಡೆಸಲಾಗುವುದು. ಕರ್ನಾಟಕ ಸಹಕಾರ ಸಂಘಗಳ ನಿಯಮ 1960 18(ಸಿ) ರನ್ವಯ ಹುದ್ದೆಗಳ ನೇಮಕಾತಿಗಾಗಿ ಒಟ್ಟು 200 ಅಂಕಗಳ ಪರೀಕ್ಷೆ ಇದ್ದು, ಕನ್ನಡ ಭಾಷೆಗೆ –50 ಅಂಕಗಳು, ಸಾಮಾನ್ಯ ಇಂಗ್ಲೀಷಗೆ –25 ಅಂಕಗಳು, ಸಾಮಾನ್ಯ ಜ್ಞಾನಕ್ಕೆ –25 ಅಂಕಗಳು ಸಹಕಾರ ವಿಷಯಗಳಿಗೆ –50 ಅಂಕಗಳು, ಭಾರತದ ಸಂವಿಧಾನಕ್ಕಾಗಿ –25 ಅಂಕಗಳು ಹಾಗೂ ಸಮಾಜದ ಯುಕ್ತವಾದ ಚಟುವಟಿಕೆಗಳು ಮತ್ತು ವಸ್ತುನಿಷ್ಠ ವಿಷಯಗಳಿಗೆ –25 ಅಂಕಗಳು ಒಳಗೊಂಡಿರುತ್ತದೆ.

ಲಿಖಿತ ಪ್ರರೀಕ್ಷೆಯಲ್ಲಿ ಗಳಿಸಿದ ಅಂಕಗಳ ಶೇಕಡಾವಾರು ಆಧಾರದ ಮೇಲೆ (ಮೆರಿಟ್) 1:5 ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳನ್ನು ಮೌಖಿಕ ಸಂದರ್ಶನಕ್ಕೆ ಕರೆಯಲಾಗುವುದು. ಮೌಖಿಕ ಸಂದರ್ಶನಕ್ಕೆ ಗರಿಷ್ಠ 15 ಅಂಕಗಳನ್ನು ನಿಗಧಿಪಡಿಸಲಾಗಿದೆ. ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇ. 85 ಕ್ಕೆ ಇಳಿಸಿ ಪ್ರಾಪ್ತವಾಗುವ ಅಂಕಗಳ ಜೊತೆಗೆ ಸಂದರ್ಶನದಲ್ಲಿ ಗಳಿಸಿದ ಅಂಕಗಳನ್ನು ಒಟ್ಟುಗೂಡಿಸಿ ಪಡೆಯಲಾದ ಒಟ್ಟು ಅಂಕಗಳ ಅಧಾರದ ಮೇಲೆ ಯಶಸ್ವಿ ಅಭ್ಯರ್ಥಿಗಳ ಅರ್ಹತಾ (ಮೆರಿಟ್) ಪಟ್ಟಿಯನ್ನು ತಯಾರಿಸಿ ಅರ್ಹತೆಯ ಅಧಾರದಲ್ಲಿ ಮೀಸಲಾತಿ ನಿಯಮಗಳನ್ನು ಅನುಸರಿಸಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುತ್ತದೆ. ಅಭ್ಯರ್ಥಿಗಳ ಅರ್ಹತೆ ಬಗ್ಗೆ ಒಕ್ಕೂಟದ ನೇಮಕಾತಿ ಸಮಿತಿಯ ನಿರ್ಣಯವೇ ಅಂತಿಮವಾಗಿರುತ್ತದೆ. **ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು. ಇದಕ್ಕೆ ಅಭ್ಯರ್ಥಿಯು ಬದ್ದರಾಗಿರಬೇಕು.**

ಕಿರಿಯ ತಾಂತ್ರಿಕ ಮತ್ತು ಹಾಲು ರವಾನೆಗಾರರು ವೃಂದದ ಹುದ್ದೆಗಳನ್ನು ಹೊರತುಪಡಿಸಿ ಅಭ್ಯರ್ಥಿಗಳು ಒಂದಕ್ಕಿಂತ ಹೆಚ್ಚಿನ ವೃಂದದ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ ಲಿಖಿತ ಪರೀಕ್ಷೆಗೆ ಅರ್ಹರಾದಲ್ಲಿ ಅಂತಹ ಅಭ್ಯರ್ಥಿಗಳು ಲಿಖಿತ ಪ್ರರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಎಲ್ಲ ವೃಂದದ ಹುದ್ದೆಗಳಿಗೂ ಪರಿಗಣಿಸಲಾಗುವುದು.

**ಕಿರಿಯ ತಾಂತ್ರಿಕರು ಮತ್ತು ಹಾಲು ರವಾನೆಗಾರ ವೃಂದದ ಹುದ್ದೆಗಳಿಗೆ ಪ್ರತ್ಯೇಕ ಲಿಖಿತ ಪರೀಕ್ಷೆ ಇರುತ್ತದೆ.**

**5. ಲಿಖಿತ ಪರೀಕ್ಷೆಯ ಪ್ರವೇಶ ಪತ್ರ:** ಲಿಖಿತ ಪರೀಕ್ಷೆಗೆ ಅರ್ಹವಿರುವ ಅಭ್ಯರ್ಥಿಗಳಿಗೆ ಪ್ರವೇಶ ಪತ್ರ ಹಾಗೂ ಲಿಖಿತ ಪರೀಕ್ಷೆಯ ದಿನಾಂಕ, ಸ್ಥಳ ಮತ್ತು ಸಮಯವನ್ನು ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಲಾಗುವುದು. ಅರ್ಹ ಅಭ್ಯರ್ಥಿಗಳು ಲಿಖಿತ ಪರೀಕ್ಷೆಯ ಪ್ರವೇಶ ಪತ್ರ (e-Call letters) ಗಳನ್ನು ಅಧಿಕೃತ ಜಾಲತಾಣ **www.bimul.coop** ದಿಂದ ಡೌನ್‌ಲೋಡ್ ಮಾಡಿಕೊಂಡು ಲಿಖಿತ ಪರೀಕ್ಷೆಗೆ ಪ್ರವೇಶ ಪಡೆಯುವ ಸಂದರ್ಭದಲ್ಲಿ ಹಾಜರುಪಡಿಸತಕ್ಕದ್ದು. ಅರ್ಹ ಅಭ್ಯರ್ಥಿಗಳಿಗೆ ಲಿಖಿತ ಪರೀಕ್ಷೆಯ ಪ್ರವೇಶ ಪತ್ರವನ್ನು ಡೌನ್‌ಮಾಡಿಕೊಳ್ಳಲು SMS ಮೂಲಕ ಮಾಹಿತಿಯನ್ನು ತಿಳಿಸಲಾಗುವುದು ಹಾಗೂ ಒಕ್ಕೂಟದ ಜಾಲತಾಣದಲ್ಲಿ ಪ್ರಕಟಿಸಲಾಗುವುದು. ಪ್ರವೇಶ ಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ನಿಗಧಿಪಡಿಸಿದ ದಿನಾಂಕ, ಸ್ಥಳ ಮತ್ತು ವೇಳೆಯಲ್ಲಿ ಹಾಜರಾಗುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

**ಸೂಚನೆಗಳು**

1) ಅಭ್ಯರ್ಥಿಯು ಒಂದು ಹುದ್ದೆಗೆ ಒಂದೇ ಅರ್ಜಿ ಸಲ್ಲಿಸತಕ್ಕದ್ದು. ಒಂದಕ್ಕಿಂತ ಹೆಚ್ಚಿನ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಚ್ಛಿಸಿದಲ್ಲಿ ಅಂತಹ ಅಭ್ಯರ್ಥಿಗಳು ಅದೇ ನೋಂದಣಿ ಸಂಖ್ಯೆ ಅಡಿಯಲ್ಲಿಯೇ ಪ್ರತಿ ಹುದ್ದೆಗೆ ಪ್ರತ್ಯೇಕವಾಗಿ ಅರ್ಜಿ ಶುಲ್ಕವನ್ನು ಪಾವತಿಸಿ, ಪ್ರತ್ಯೇಕ ಅರ್ಜಿ ಸಲ್ಲಿಸತಕ್ಕದ್ದು.
2) ಆಲ್‌ಲೈನ್ (Online) ಅರ್ಜಿಗಳನ್ನು ಹೊರತುಪಡಿಸಿ ಯಾವುದೇ ರೀತಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.
3) ಅಭ್ಯರ್ಥಿಗಳು ಆಲ್‌ಲೈನ್‌ನಲ್ಲಿ ನೀಡಿದ ಸೂಚನೆಗಳನ್ವಯ ಮಾತ್ರ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು.
4) ಅಭ್ಯರ್ಥಿಗಳು ತಪ್ಪು ಮಾಹಿತಿಗಳನ್ನು ನೀಡಿ ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
5) ಆಲ್‌ಲೈನ್ (Online) ಮೂಲಕ ಅರ್ಜಿಯನ್ನು ಸಲ್ಲಿಸುವ ಸಂದರ್ಭದಲ್ಲಿ ಅಪ್‌ಲೋಡ್ ಮಾಡಬೇಕಾದ ಪ್ರಮಾಣ ಪತ್ರ, ದಾಖಲಾತಿಗಳನ್ನು ಸ್ಪಷ್ಟವಾಗಿ ಕಾಣುವಂತೆ ಮತ್ತು ಓದಲು ಸಾಧ್ಯವಾಗುವಂತೆ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
6) ನಿಗಧಿತ ಶುಲ್ಕ ಸಂದಾಯ ಮಾಡದಿದ್ದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
7) **ಅರ್ಜಿ ಶುಲ್ಕವನ್ನು ಪಾವತಿಸುವುದಕ್ಕೆ ಡೆಬಿಟ್/ಕ್ರೆಡಿಟ್/ಆಲ್‌ಲೈನ್/ಯುಪಿಐ ಮೂಲಕ ನಿಗಧಿತ ಶುಲ್ಕ + ಅನ್ವಯಿಸುವ ಬ್ಯಾಂಕ್ ಶುಲ್ಕವನ್ನು ಪ್ರತ್ಯೇಕ ಪಾವತಿ ಮಾಡತಕ್ಕದ್ದು.** ಡಿ.ಡಿ/ಚೆಕ್/ಪೋಸ್ಟಲ್ ಆರ್ಡರ್ ಇವುಗಳ ಮೂಲಕ ಅರ್ಜಿ ಶುಲ್ಕ ಪಾವತಿಗೆ ಅವಕಾಶವಿರುವುದಿಲ್ಲ.
8) ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯು ಹಿಂದಿರುಗಿಸಲಾಗುವುದಿಲ್ಲ. ಅಥವಾ ಅದನ್ನು ಇತರೆ ನೇಮಕಾತಿಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ.
9) ಈ ಪ್ರಕಟಣೆಯಲ್ಲಿ ತಿಳಿಸಿದಂತೆ ಆಯಾ ಹುದ್ದೆಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಹತೆ ಹೊರತುಪಡಿಸಿ ಇತರೆ ಯಾವುದೇ ವಿದ್ಯಾರ್ಹತೆ ಪರಿಗಣಿಸಲಾಗುವುದಿಲ್ಲ.
10) ಅಗತ್ಯವಿರುವ ಹುದ್ದೆಗಳಿಗೆ ಅಗತ್ಯ ವಿದ್ಯಾರ್ಹತೆ ಪಡೆದ ನಂತರ ಆಯಾ ಕ್ಷೇತ್ರ/ಹುದ್ದೆಗೆ ಸಂಬಂಧಪಟ್ಟ ಸೇವಾನುಭವ ದೃಡೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಡೀಕರಣ ಪತ್ರವನ್ನು ಕಡ್ಡಾಯವಾಗಿ ಆನ್‌ಲೈನ್‌ನಲ್ಲಿ ಅಪ್-ಲೋಡ್ ಮಾಡುವುದು. ಹಾಗೂ ಅರ್ಹರಾದಲ್ಲಿ ಮೂಲ ದಾಖಲಾತಿಗಳನ್ನು ಪರಿಶೀಲನೆ ವೇಳೆ ಕಡ್ಡಾಯವಾಗಿ ಹಾಜರಿಪಡಿಸತಕ್ಕದ್ದು.
11) ಅರ್ಜಿಗಳನ್ನು ಭರ್ತಿಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ನೇಮಕಾತಿ ಪ್ರಕಟಣೆಯಲ್ಲಿ ಆಯಾಯಾ ಹುದ್ದೆಗಳಿಗೆ ಸೂಚಿಸಿರುವ ಕನಿಷ್ಠ ವಿದ್ಯಾರ್ಹತೆಯನ್ನು ಅಭ್ಯರ್ಥಿಗಳು ಕಡ್ಡಾಯವಾಗಿ ಹೊಂದಿರಲೇಬೇಕು. ಒಕ್ಕೂಟದ ಅನುಮೋದಿತ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ನಿಗಧಿಪಡಿಸಿದ ವಿದ್ಯಾರ್ಹತೆಯನ್ನು ಹೊರತುಪಡಿಸಿ ಇತರೆ ಯಾವುದೇ ಸಮಾನಾಂತರ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ.
12) ಒಕ್ಕೂಟವು ಅಭ್ಯರ್ಥಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸುವುದಿಲ್ಲ.

**6) ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು :**

ಜಾತಿ/ಮೀಸಲಾತಿ ಕೋರ ಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಯಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರತಕ್ಕದ್ದು ಮತ್ತು ಚಾಲ್ತಿಯಲ್ಲಿರತಕ್ಕದ್ದು.

1) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ : ನಮೂನೆ 'ಡಿ'
2) ಪ್ರವರ್ಗ-1 ಕ್ಕೆ ಸೇರಿದ ಅಭ್ಯರ್ಥಿಗಳಿಗೆ : ನಮೂನೆ 'ಇ'
3) ಪ್ರವರ್ಗ 2ಎ, 2ಬಿ, 3ಎ, 3ಬಿ ಸೇರಿದ ಅಭ್ಯರ್ಥಿಗಳಿಗೆ : ನಮೂನೆ 'ಎಫ್'

ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂದಪಟ್ಟ ತಹಶೀಲ್ದಾರವರಿಂದ ಪಡೆದುಕೊಂಡಿರತಕ್ಕದ್ದು. ಅಂದರೆ ಹಿಂದುಳಿದ ವರ್ಗಗಳ ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 05 ವರ್ಷ ಚಾಲ್ತಿಯಲ್ಲಿರುತ್ತವೆ. ಅರ್ಜಿಯ ನಿಗಧಿತ ಸ್ಥಳದಲ್ಲಿ ಪ್ರಮಾಣ ಪತ್ರವನ್ನು ತಪ್ಪದೇ ಅಪ್‌ಲೋಡ್ ಮಾಡುವುದು. ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ತಪ್ಪದೇ ಪರಿಶೀಲನೆಗೆ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯ ಅಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಪ್ರಮಾಣ ಪತ್ರಗಳ ನಮೂನೆಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಈ ಅಧಿಸೂಚನೆಯ ಕೊನೆಯಲ್ಲಿ ತೋರಿಸಲಾಗಿದೆ.

**6.1 ಗ್ರಾಮೀಣ ಅಭ್ಯರ್ಥಿ:** ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳರೀತ್ಯ 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು. ಗ್ರಾಮೀಣ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ-2 ನ್ನು ಸಂಬಂದಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ನಿಗಧಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರವರಿಂದ ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.
ಅಂತೆಯೆ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಠ ಜಾತಿ / ಪರಿಶಿಷ್ಠ ಪಂಗಡ, ಪ್ರವರ್ಗ-2ಎ, ಪ್ರವರ್ಗ-2ಬಿ, ಪ್ರವರ್ಗ-3ಎ ಮತ್ತು ಪ್ರವರ್ಗ-3ಬಿ ವರ್ಗದ ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜು ಪಡೆದಿರಬೇಕು. ಹಾಗೂ ಸಂದರ್ಶನಕ್ಕೆ ಅರ್ಹರಾದಾಗ ಸಂದರ್ಶನ ಸಮಯದಲ್ಲಿ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಯನ್ನು ತಪ್ಪದೆ ಪರಿಶೀಲನೆಗೆ ಹಾಜರುಪಡಿಸತಕ್ಕದ್ದು. ತಪ್ಪಿದ್ದಲ್ಲಿ ಅಂತಹ ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.

**6.2 ಅಂಗವಿಕಲ ಅಭ್ಯರ್ಥಿ:** ಶೇ. 40 ಕ್ಕಿಂತ ಕಡಿಮೆ ಇಲ್ಲದಂತಹ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಅಂಗವಿಕಲ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳ ರೀತ್ಯ ನಿಗಧಿತ ನಮೂನೆಯಲ್ಲಿ ಜಿಲ್ಲಾ ಮಟ್ಟದ ವೈದ್ಯಕೀಯ ಪ್ರಾಧಿಕಾರದಿಂದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿರಬೇಕು. ಬೇರೆ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಹಾಗೂ ಗುರುತಿನ ಚೀಟಿ ಪ್ರಮಾಣ ಪತ್ರಗಳನ್ನು ಪರಿಗಣಿಸಲಾಗುವುದಿಲ್ಲ. ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನಕ್ಕೆ ಅರ್ಹರಾದಾಗ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಗೆ ಅನರ್ಹರಾಗುತ್ತಾರೆ.

**6.3 ಕನ್ನಡ ಮಾಧ್ಯಮ:** ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ನಿಯಮಗಳರೀತ್ಯ ನಿಗಧಿತ ನಮೂನೆಯಲ್ಲಿ 1 ರಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂದಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ, ಜಾರಿ ದಿನಾಂಕ ಹಾಗೂ ಮೊಹರಿನೊಂದಿಗೆ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದುಕೊಂಡಿರಬೇಕು. ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಸಂದರ್ಶನಕ್ಕೆ ಅರ್ಹರಾದಾಗ ಹಾಜರುಪಡಿಸತಕ್ಕದ್ದು, ತಪ್ಪಿದ್ದಲ್ಲಿ ಅಂತಹ ಅಭ್ಯರ್ಥಿಗಳ ಕನ್ನಡ ಮಾಧ್ಯಮ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**6.5 ಮಾಜಿ ಸೈನಿಕ:** ಮಾಜಿ ಸೈನಿಕ ಅಂದರೆ ಕೇಂದ್ರ ಸಶಸ್ತ್ರ ದಳಗಳಾದ ಭೂದಳ, ನೌಕಾದಳ ಮತ್ತು ವಾಯುದಳಗಳಲ್ಲಿ ಯಾವುದೇ ಶ್ರೇಣಿಯಲ್ಲಿ (ಯೋಧ ಅಥವಾ ಯೋಧನಲ್ಲದ) ಸೇವೆಸಲ್ಲಿಸಿದ ವ್ಯಕ್ತಿ.
ಅಂದರೆ

1) ಅಂತಹ ಸೇವೆಯಿಂದ ನಿವೃತ್ತಿ ಹೊಂದಿದ ನಂತರ ನಿವೃತ್ತಿ ವೇತನ ಪಡೆಯುತ್ತಿರುವ ವ್ಯಕ್ತಿ.
2) ವೈದ್ಯಕೀಯ ಕಾರಣಗಳಿಂದ ಮಿಲಿಟರಿ ಸೇವೆಗೆ ಅನರ್ಹನಾದವ ಅಥವಾ ವ್ಯಕ್ತಿಯ ಹಿಡಿತಕ್ಕು ಮೀರದ ಪರಿಸ್ಥಿತಿಗಳಿಂದ ಮತ್ತು ವೈದ್ಯಕೀಯ ಅಥವಾ ಅಸಾಮರ್ಥ್ಯದ ಪಿಂಚಣಿ ಪಡೆದು ಸೇವೆಯಿಂದ ಬಿಡುಗಡೆಯಾದ ವ್ಯಕ್ತಿ.
3) ಸ್ವಂತ ಕೊರಿಕೆ ಹೊರತುಪಡಿಸಿ ಸಿಬ್ಬಂದಿ ಕಡಿತದ ಪರಿಣಾಮದಿಂದ ಅಂತಹ ಸೇವೆಯಿಂದ ಬಿಡುಗಡೆ ಹೊಂದಿದ ವ್ಯಕ್ತಿ.
4) ಸ್ವಂತ ಕೋರಿಕೆ ಮೇರೆಗೆ ಅಥವಾ ದುರ್ನಡತೆ ಅಥವಾ ಅಸಾಮರ್ಥ್ಯದ ಕಾರಣದಿಂದಾಗಿ ತೆಗೆದುಹಾಕಿರುವ ಅಥವಾ ಕರ್ತವ್ಯದಿಂದ ವಜಾ ಮಾಡಿದ ವ್ಯಕ್ತಿಗಳನ್ನು ಹೊರತುಪಡಿಸಿ ನಿರ್ದಿಷ್ಠ ಅವಧಿಯನ್ನು ಪೂರೈಸಿದ ತರುವಾಯ ಬಿಡುಗಡೆಹೊಂದಿದ ವ್ಯಕ್ತಿ ಮತ್ತು ಗ್ರಾಚ್ಯುಟಿ ಪಡೆದಿರುವ ವ್ಯಕ್ತಿ.
5) ಪ್ರಾಂತೀಯ ಸೇವೆಯ ಈ ಕೆಳಗೆ ಹೆಸರಿಸಿದ ವರ್ಗದ ಸಿಬ್ಬಂದಿ.
   ಅ) ನಿರಂತರ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿದ ಪಿಂಚಣಿದಾರರು.
   ಆ) ಮಿಲಿಟರಿ ಸೇವೆಯಿಂದ ಉಂಟಾದ ದೈಹಿಕ ಅಸಾಮರ್ಥ್ಯತೆ ಹೊಂದಿ ಬಿಡುಗಡೆಯಾದ ವ್ಯಕ್ತಿ.
   ಇ) ಗ್ಯಾಲಂಟ್ರಿ ಪ್ರಶಸ್ತಿ ವಿಜೇತರರು.

**ವಿವರಣೆ:**

1) ಕೇಂದ್ರ ಸಶಸ್ತ್ರ ದಳದ ಸೇವೆಯಲ್ಲಿ ವ್ಯಕ್ತಿಗಳು ಸೇವೆಯಿಂದ ನಿವೃತ್ತಿ ಹೊಂದಿದ ನಂತರ ಮಾಜಿ ಸೈನಿಕರ ವರ್ಗಕ್ಕೆ ಬರುವ ವ್ಯಕ್ತಿಗೆ ಒಪ್ಪಂದವು ಪೂರ್ಣವಾಗಲು ಒಂದು ವರ್ಷಕ್ಕೆ ಮುನ್ನ ಪುನರ್ ಉದ್ಯೋಗಕ್ಕೆ ಅರ್ಜಿ ಹಾಕಿಕೊಳ್ಳಲು ಹಾಗೂ ಅವರಿಗೆ ಮಾಜಿ ಸೈನಿಕರಿಗೆ ದೊರೆಯುವ ಎಲ್ಲಾ ಸೌಲಭ್ಯಗಳನ್ನು ಹೊಂದಲು ಅನುಮತಿ ನೀಡಲಾಗಿದ್ದರು ಸಮವಸ್ತ್ರವನ್ನು ತ್ಯಜಿಸಲು ಅನುಮತಿ ನೀಡುವವರೆಗೆ ಒಕ್ಕೂಟದ ಹುದ್ದೆಗೆ ನೇಮಕ ಹೊಂದುವಂತಿಲ್ಲ.
2) ಕೇಂದ್ರ ಶಸಸ್ತ್ರ ದಳದಲ್ಲಿ ಸೇವೆ ಸಲ್ಲಿಸುವಾಗ ಕೊಲ್ಲಲ್ಪಟ್ಟ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ವ್ಯಕ್ತಿಗಳ ಕುಟುಂಬದವರು (ಸಂದರ್ಭಾನುಸಾರ ಪತ್ನಿ ಅಥವಾ ಪತಿ ಮತ್ತು ಮಕ್ಕಳು ಮತ್ತು ಮಲಮಕ್ಕಳು) ಮಾಜಿ ಸೈನಿಕ ಮೀಸಲಾತಿ ಪಡೆಯಲು ಅರ್ಹರಿರುತ್ತಾರೆ. ಆದರೆ ಅಂತಹವರುಗಳು ವಯೋಮಿತಿ ಸಡಿಲಿಕೆಯನ್ನು ಪಡೆಯಲು ಅರ್ಹರಿರುವುದಿಲ್ಲ.

**6.6 ವಿಮೂಲ್ ಹಾ.ಉ.ಸ.ಸಂಘದ ಸಿಬ್ಬಂದಿ:** ವಿಮೂಲ್ ವ್ಯಾಪ್ತಿಯ ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಸೇವೆ ಸಲ್ಲಿಸುತ್ತಿರುವ ಸಿಬ್ಬಂದಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಪ್ರಸ್ತುತ ಸಂಘದಲ್ಲಿ ಸೇವೆ ಸಲ್ಲಿಸುತ್ತಿರಬೇಕು ಹಾಗೂ ಕನಿಷ್ಠ 05 ವರ್ಷ ಸೇವೆ ಸಲ್ಲಿಸಿದವರಾಗಿರಬೇಕು. ಇದಕ್ಕೆ ಸಂಬಂದಪಟ್ಟಂತೆ, ಸಂಬಂದಿಸಿದ ವಿಭಾಗದ ಮುಖ್ಯಸ್ಥರ ಶಿಫಾರಸ್ಸಿನೊಂದಿಗೆ ವ್ಯವಸ್ಥಾಪಕರು (ಶೇ.ತಾಂ) ರವರಿಂದ ಧೃಡೀಕರಿಸಿದ ಸೇವಾ ಧೃಡೀಕರಣ ಪತ್ರವನ್ನು ಹಾಗೂ ಸಂಬಂಧಿಸಿದ ಸಂಘದ ಆಡಳಿತ ಮಂಡಲಿ ಠರಾವಿನೊಂದಿಗೆ ನಿರಾಕ್ಷೇಪಣಾ ಪ್ರತ್ರವನ್ನು ಅರ್ಜಿಯೊಂದಿಗೆ ಕಡ್ಡಾಯವಾಗಿ ಅಪ್‌ಲೋಡ್ ಮಾಡತಕ್ಕದ್ದು.

**7. ಅಭ್ಯರ್ಥಿಗಳು ಆನಲೈನ ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಈ ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು.**

**ಹಂತ:-1)**

ಅಭ್ಯರ್ಥಿಗಳು ಒಕ್ಕೂಟದ ಅಧಿಕೃತ ವೆಬ್‌ಸೈಟ್ **www.bimul.coop** ಮೂಲಕ ಆನ್‌ಲೈನ್ ಅರ್ಜಿಯನ್ನು ಭರ್ತಿ ಮಾಡುವ ಪೂರ್ವದಲ್ಲಿ ಅಧಿಸೂಚನೆ ಮತ್ತು ಸೂಚನೆಗಳನ್ನು ಕಡ್ಡಾಯವಾಗಿ ಓದಿ ಮುಂದುವರಿಯುವುದು.

**ಹಂತ:-2)**

**REGISTER HERE TO CREATE AN ACCOUNT** ಮೇಲೆ ಒತ್ತಿ ಮುಂದುವರೆಯಿರಿ, ರಿಜಿಸ್ಟ್ರೇಷನ್ ಪುಟವು ತೆರೆದುಕೊಳ್ಳುತ್ತದೆ. ಇಲ್ಲಿ ಎಲ್ಲಾ ಮಾಹಿತಿಯನ್ನು ಸರಿಯಾಗಿ ತುಂಬಿದ ನಂತರ **REGISTER** ಗುಂಡಿಯನ್ನು ಒತ್ತಿ. ನಿಮ್ಮ ಮೊಬೈಲ್‌ಗೆ ಒಂದು **OTP** ಬರುತ್ತದೆ. ಈ **OTP** ಉಪಯೋಗಿಸಿಕೊಂಡು **ALREADY HAVE AN ACCOUNT? SIGN IN HERE TO FILL THE APPLICATION** ಗುಂಡಿಯನ್ನು ಒತ್ತಿ ಲಾಗಿನ್ ಮಾಡಿರಿ.

**ಹಂತ:-3)**

ನಂತರ ಬರುವ ಪುಟದಲ್ಲಿ ನಿಮ್ಮ ವಯಕ್ತಿಕ ಮಾಹಿತಿಯನ್ನು ತುಂಬಿರಿ, ಈ ಪುಟದಲ್ಲಿರುವ ಎಲ್ಲಾ ಮಾಹಿತಿಯನ್ನು ಖಾಲಿ ಬಿಡದಂತೆ ತುಂಬಬೇಕು. ಹಾಗೆ ತುಂಬಿದ ನಂತರ **NEXT** ಗುಂಡಿಯನ್ನು ಒತ್ತಿರಿ.

**ವಿ.ಸೂ.:** ಒಮ್ಮೆ **NEXT** ಗುಂಡಿಯನ್ನು ಒತ್ತಿ ಮುಂದುವರಿದ ನಂತರ ನಿಮ್ಮ ವಯಕ್ತಿಕ ಮಾಹಿತಿಯನ್ನು ಬದಲಾಯಿಸಲು ಸಾಧ್ಯವಿರುವುದಿಲ್ಲ. ಆದುದರಿಂದ ನಮೂದಿಸಿದ ವಿವರಗಳನ್ನು ಮೊತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ **NEXT** ಗುಂಡಿಯನ್ನು ಒತ್ತಿ ಮುಂದುವರೆಯಿರಿ.

**ಹಂತ:-4)**

ಸಂಬಂಧಪಟ್ಟ ಹುದ್ದೆಯನ್ನು ಆಯ್ಕೆ ಮಾಡಿ **APPLY** ಗುಂಡಿಯನ್ನು ಒತ್ತಿ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು, ಅರ್ಜಿಯನ್ನು ಭರ್ತಿ ಮಾಡಿದ ನಂತರ ನಮೂದಿಸಿದ ವಿವರಗಳನ್ನು ಮೊತ್ತೊಮ್ಮೆ ಕೂಲಂಕುಷವಾಗಿ ಪರಿಶೀಲಿಸಿಕೊಂಡು, ಎಲ್ಲಾ ವಿವರಗಳು ಸರಿಯಾಗಿರುತ್ತವೆಯೆಂದು ಖಚಿತಪಡಿಸಿಕೊಂಡ ನಂತರ **CONTINUE TO UPLOAD THE DOCUMENTS** ಗುಂಡಿಯನ್ನು ಒತ್ತಿ ಮುಂದುವರೆಯಿರಿ.

**ಹಂತ:–5)**

ನಂತರ ಬರುವ ದಾಖಲಾತಿ ಅಪ್‌ಲೋಡ್ ಫಾರಂನಲ್ಲಿ ಅಭ್ಯರ್ಥಿಗಳು ಸಂಬಂಧಪಟ್ಟ ವಿದ್ಯಾರ್ಹತೆ, ಸೇವಾನುಭವ, ಮೀಸಲಾತಿ, ಅಂಗವಿಕಲ, ದೃಢೀಕರಣ ಪತ್ರ, ಮಾಜಿ ಸೈನಿಕ, ಗ್ರಾಮೀಣ ಪ್ರಮಾಣ ಪತ್ರ, ವಯೋಮಿತಿ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳನ್ನು ಸಂಬಂಧಪಟ್ಟ ಎಲ್ಲಾ ಪ್ರಮಾಣ ಪತ್ರಗಳನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
**ವಿಶೇಷ ಸೂಚನೆ :** ಮೊಬೈಲ್ ಕ್ಯಾಮರಾ ಸಹಾಯದಿಂದ ಸೆರೆಹಿಡಿದ / ಸ್ಪಷ್ಟತೆ ಇಲ್ಲದಿರುವ ದಾಖಲಾತಿಗಳನ್ನು ಅಪ್‌ಲೋಡ್ ಮಾಡಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಹಂತ:–6)**

ಸೇವಾನುಭವ ಧೃಡೀಕರಣ ಪತ್ರವನ್ನು ಸಲ್ಲಿಸುವವರು ಉದ್ಯೋಗದಾತರಿಂದ ಪಡೆದ ಸೇವಾ ದೃಢೀಕರಣ ಮತ್ತು ನಿರಪೇಕ್ಷಣಾ ಪತ್ರವನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡತಕ್ಕದ್ದು.

**ಹಂತ:–7)**

ಈ ಕೊನೆಯ ಪುಟದಲ್ಲಿ ಅರ್ಜಿ ಶುಲ್ಕವನ್ನು ಪೇಮೆಂಟ್ ಗೇಟ್ ವೇ ಮುಖಾಂತರವೇ ಮಾಡತಕ್ಕದ್ದು.

**ಹಂತ:–8)**

ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಪಡೆಯಲು **Download** ಗುಂಡಿಯನ್ನು ಒತ್ತಿ, ಅಭ್ಯರ್ಥಿಗಳು ಅರ್ಜಿಯ ಪ್ರತಿಯನ್ನು ಕಡ್ಡಾಯವಾಗಿ **Download** ಮಾಡಿಕೊಳ್ಳತಕ್ಕದ್ದು, ಒಕ್ಕೂಟವು ಅಪೇಕ್ಷಿಸಿದಾಗ ಈ ಪ್ರತಿಯನ್ನು ಹಾಜರಿಪಡಿಸಬೇಕು.

**ಹಂತ:–9)**

ಪಾಸಪೋರ್ಟ್ ಅಳತೆಯ ಕಲರ್ ಭಾವಚಿತ್ರ ಮತ್ತು ಅಭ್ಯರ್ಥಿಯ ಸಹಿಯನ್ನು 100 ಕೆ.ಬಿ.ಯ ಒಳಗಡೆ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
ಅಗತ್ಯ ದಾಖಲಾತಿಗಳ ಸೈಜ್ ಗಾತ್ರ ಇತ್ಯಾದಿಗಳು ಅಪ್‌ಲೋಡ್ ಮಾಡುವ ಸಂದರ್ಭದಲ್ಲಿ ಕಂಪ್ಯೂಟರ್ ಪರದೆಯಲ್ಲಿ ಬರುವ ಗಾತ್ರಕ್ಕೆ ಅನುಗುಣವಾಗಿ ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡತಕ್ಕದ್ದು.

**ವಿಶೇಷ ಸೂಚನೆ:** ಆನ್‌ಲೈನ ಮೂಲಕ ಅರ್ಜಿಯನ್ನು ಭರ್ತಿಮಾಡುವ ಸಂದರ್ಭದಲ್ಲಿ ಯಾವುದಾದರು ತಾಂತ್ರಿಕ ತೊಂದರೆ ಅಥವಾ ಸಮಸ್ಯೆ ಎದುರಾದಲ್ಲಿ ಸಹಾಯವಾಣಿ **(HelpLine No)** 8867031693 ರಲ್ಲಿ ಸಂಪರ್ಕಿಸಿ ಅಗತ್ಯ ಮಾಹಿತಿ ಪಡೆಯಬಹುದು. (ಬೆಳಿಗ್ಗೆ 10 ರಿಂದ ಸಂಜೆ 5 ಘಂಟೆಯವರೆಗೆ.)

**ಕಡ್ಡಾಯವಾಗಿ ಹಾಜರಪಡಿಸಬೇಕಾದ ಮೂಲ ಪ್ರಮಾಣ ಪತ್ರಗಳು:**

**8. ಅರ್ಜಿಯ ಜೊತೆ ಸಂಬಂಧಿಸಿದ ಈ ಕೆಳಕಂಡ ಪ್ರಮಾಣ ಪತ್ರಗಳನ್ನು ಆನ್‌ಲೈನ್‌ನಲ್ಲಿ ತಪ್ಪದೇ ಅಪ್‌ಲೋಡ್ ಮಾಡುವುದು ಹಾಗೂ ಮೌಖಿಕ ಸಂದರ್ಶನಕ್ಕೆ ಅರ್ಹರಾದಲ್ಲಿ ಸದರಿ ಮೂಲ ಪ್ರತಿಗಳನ್ನು ಕಡ್ಡಾಯವಾಗಿ ಹಾಜರಪಡಿಸುವುದು.**

1. ವಿವಿಧ ಹುದ್ದೆಗಳಿಗೆ ನಿಗದಿಪಡಿಸಲಾದ ವಿದ್ಯಾರ್ಹತೆಯ/ಎಲ್ಲಾ ಸೆಮಿಸ್ಟರ್‌ಗಳ/ವರ್ಷಗಳ ಪ್ರಮಾಣ ಪತ್ರಗಳು ಅಥವಾ ಅಂಕಪಟ್ಟಿಗಳು.
2. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ಜನ್ಮ ದಿನಾಂಕವನ್ನು ತೋರಿಸುವ ಸಂಚಿತ ದಾಖಲೆಯ ಉದ್ಧೃತಭಾಗ (Extract of Cumulative Record)/ಜನನ ಪ್ರಮಾಣ ಪತ್ರಗಳು.
3. ವಿವಿಧ ಮೀಸಲಾತಿಗಳನ್ನು ಕೋರಿದ್ದಲ್ಲಿ, ಮೀಸಲಾತಿ ಪ್ರಮಾಣ ಪತ್ರಗಳು.
4. ಅನುಭವ ಪ್ರಮಾಣ ಪತ್ರಗಳು.
5. ಕಂಪ್ಯೂಟರ್ ನಿರ್ವಹಣೆಯಲ್ಲಿ ಸಂಬಂಧಪಟ್ಟ ಹುದ್ದೆಗಳಿಗೆ ನಿಗದಿಪಡಿಸಿರುವ ಪ್ರಮಾಣ ಪತ್ರಗಳು.

**ಮೀಸಲಾತಿ ಹಾಗೂ ವಯೋಮಿತಿ ರಿಯಾಯತಿ ಕೋರಿದ್ದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳು:**

1. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಮೀಸಲಾತಿ ಅಭ್ಯರ್ಥಿಗಳು ಅನ್ವಯವಾಗುವ ನಮೂನೆ ಡಿ/ಇ/ಎಫ್ ನಲ್ಲಿ ತಹಶಿಲ್ದಾರ್ ರವರಿಂದ ಪಡೆದಿರುವ ಪ್ರಮಾಣ ಪತ್ರ.
2. ಗ್ರಾಮೀಣ ಮೀಸಲಾತಿ ಪಡೆಯುವ ಸಾಮಾನ್ಯ ಅಭ್ಯರ್ಥಿಗಳು ನಮೂನೆ–1 ಮತ್ತು 2 ನ್ನು ಹಾಗೂ ಇತರೆ ಅಭ್ಯರ್ಥಿಗಳಿಗೆ ನಮೂನೆ–2.
3. ಅಂಗವಿಕಲ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ವೈದ್ಯಕೀಯ ಪ್ರಮಾಣ ಪತ್ರ.

4. ಕನ್ನಡ ಮಾಧ್ಯಮ ಅಭ್ಯರ್ಥಿಗಳು ನಿಗದಿಪಡಿಸಿದ ನಮೂನೆಯಲ್ಲಿ ಪಡೆದ ಪ್ರಮಾಣ ಪತ್ರ.
5. ಇತರೆ ಸಂಘ / ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದರೆ ನಿರಾಕ್ಷೇಪಣಾ ಪ್ರಮಾಣ ಪತ್ರ.

**ಪ್ರಮುಖ ಸೂಚನೆಗಳು:**

1. ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಗಳಲ್ಲಿ ನೀಡುವ ಮಾಹಿತಿಗಳ ಆಧಾರದ ಮೇಲೆ ಅವರುಗಳು ಲಿಖಿತ ಪರೀಕ್ಷೆಗೆ ಅರ್ಹರೆ ಎಂಬುದನ್ನು ಪರಿಶೀಲಿಸಿ ಮೇಲ್ನೋಟಕ್ಕೆ ಅರ್ಹರೆಂದು ಕಂಡುಬಂದ ಅಭ್ಯರ್ಥಿಗಳಿಗೆ ಮಾತ್ರ ಲಿಖಿತ ಪರೀಕ್ಷೆಗೆ ಕರೆ ಪತ್ರಗಳನ್ನು ನೀಡುತ್ತದೆ. ಆದ್ದರಿಂದ ನಿಗದಿಪಡಿಸಿರುವ ವಯೋಮಿತಿ, ವಿದ್ಯಾರ್ಹತೆ, ಅನುಭವ, ಮೀಸಲಾತಿ ಇತ್ಯಾದಿಗಳಿಗೆ ಅನುಗುಣವಾಗಿ ಅರ್ಜಿಯಲ್ಲಿ ಸರಿಯಾದ ಮಾಹಿತಿ ನೀಡುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.
2. ಅರ್ಜಿ ಸಲ್ಲಿಸುವ ಸಂಧರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿ ಅಪ್‌ಲೋಡ್ ಮಾಡಿರುವ ದಾಖಲೆಗಳ ಆಧಾರದ ಮೇಲೆ ಮೀಸಲಾತಿ, ಜನ್ಮ ದಿನಾಂಕ, ವಿದ್ಯಾರ್ಹತೆ, ಅನುಭವ ಹಾಗೂ ವಯೋಮಿತಿ ಸಡಲಿಕೆ ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆಯನ್ನು ಪುರಸ್ಕರಿಸಲಾಗುವುದಿಲ್ಲ.
3. ಅಭ್ಯರ್ಥಿಗಳು ವಿದ್ಯಾರ್ಹತೆ, ಅನುಭವ, ಜಾತಿ ಪ್ರಮಾಣ ಪತ್ರ, ಅಂಕ ಪಟ್ಟಿಗಳು, ಜನ್ಮ ದಿನಾಂಕಕ್ಕೆ ಸಂಬಂಧಿಸಿದ ದಾಖಲೆ ಮುಂತಾದ ಅವಶ್ಯಕ ದಾಖಲೆಗಳನ್ನು ಆನ್‌ಲೈನ್‌ಲ್ಲಿ ಅಪ್‌ಲೋಡ್ ಮಾಡುವುದು ಕಡ್ಡಾಯವಾಗಿರುತ್ತದೆ. ಅಸ್ಪಷ್ಟ, ಅಪೂರ್ಣ, ಭಾವಚಿತ್ರವಿಲ್ಲದ ಮತ್ತು ಅಭ್ಯರ್ಥಿಯು ಸಹಿ ಮಾಡದೇ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
4. ನಿಗದಿಪಡಿಸಿರುವ ನಿರ್ಧಿಷ್ಟ ವಿದ್ಯಾರ್ಹತೆ ಹೊಂದಿರುವ ಅಗತ್ಯ ದಾಖಲಾತಿಗಳನ್ನು ಸಲ್ಲಿಸದೇ ಇರುವ ಹಾಗೂ ತಪ್ಪು ಮಾಹಿತಿ/ಅಪೂರ್ಣ ಮಾಹಿತಿ ಸಲ್ಲಿಸುವ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ತಿರಸ್ಕರಿಸುವ ಹಕ್ಕನ್ನು ಒಕ್ಕೂಟವು ಹೊಂದಿರುತ್ತದೆ.
5. ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬೇಕಾದಲ್ಲಿ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ (No Objection Certificate) ಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗಾಗಿ ಪಡೆದು ಅಪ್‌ಲೋಡ್ ಮಾಡತಕ್ಕದ್ದು. (ನಮೂನೆಯನ್ನು ನೇಮಕಾತಿ ಪ್ರಕಟಣೆಯ ಕೊನೆಯಲ್ಲಿ ಅನುಬಂಧದಲ್ಲಿ ನೀಡಲಾಗಿದೆ).
6. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಫೋಟೊ ಪ್ರತಿಯನ್ನು ಕಡ್ಡಾಯವಾಗಿ ತಮ್ಮೊಂದಿಗೆ ಇಟ್ಟುಕೊಳ್ಳಲು ಸೂಚಿಸಿದೆ.
7. ಅಭ್ಯರ್ಥಿಗಳು ಅರ್ಜಿಗಳನ್ನು ಆನ್‌ಲೈನ್ ಮೂಲಕ ಅಪ್‌ಲೋಡ್ ಮಾಡಿದ ನಂತರ ಸ್ಪಷ್ಟವಾಗಿ ಹಾಗೂ ನಿರ್ದಿಷ್ಟ ಗಾತ್ರದಲ್ಲಿ ಅಪ್‌ಲೋಡ್ ಮಾಡಿರುವ ಬಗ್ಗೆ ಖಚಿತಪಡಿಸಿಕೊಳ್ಳುವುದು.
8. ಯಾವುದೇ ಸಂದರ್ಭದಲ್ಲಿ ಯಾವುದೇ ಕಾರಣವನ್ನು ನೀಡದೆ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ/ತಡೆಹಿಡಿಯುವ ಬದಲಾಯಿಸುವ ಅಧಿಕಾರವನ್ನು ಒಕ್ಕೂಟವು ಹೊಂದಿರುತ್ತದೆ.
9. ಅಭ್ಯರ್ಥಿಗಳ ಆಯ್ಕೆಯ ನಂತರ ಅರ್ಜಿಯ ಜೊತೆ ಸಲ್ಲಿಸಿರುವ ವಿದ್ಯಾರ್ಹತೆ, ಮೀಸಲಾತಿ, ಜನ್ಮ ದಿನಾಂಕ ಮತ್ತು ಇತರೆ ದಾಖಲೆಗಳನ್ನು ಸಂಬಂಧಪಟ್ಟ ಸಂಸ್ಥೆ/ಪ್ರಾಧಿಕಾರ/ಶಾಲಾ/ಕಾಲೇಜು/ವಿಶ್ವವಿದ್ಯಾಲಯಗಳಿಂದ ನೈಜತೆಯ ಬಗ್ಗೆ ದೃಢೀಕರಿಸಿಕೊಳ್ಳುವ ಹಕ್ಕನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿದೆ. ಸದರಿ ದಾಖಲೆಗಳ ಪರಿಶೀಲನೆಯಲ್ಲಿ ಯಾವುದಾದರು ನ್ಯೂನ್ಯತೆ/ಸುಳ್ಳು/ನಕಲು/ದೋಷಪೂರಿತ ಅಂಶವೆಂದು ಕಂಡುಬಂದಲ್ಲಿ ಯಾವುದೇ ಮುನ್ಸೂಚನೆ ನೀಡದೆ ಅಂತವರ ನೇಮಕಾತಿಯನ್ನು ರದ್ದುಪಡಿಸುವ / ಸೇವೆಯಿಂದ ವಜಾಗೊಳಿಸುವ/ ಕಾನೂನು ರೀತ್ಯೆ ಕ್ರಮ ಜರುಗಿಸುವ ಹಕ್ಕನ್ನು ಒಕ್ಕೂಟವು ಹೊಂದಿರುತ್ತದೆ.

**ಲಿಖಿತ ಪರೀಕ್ಷೆಗೆ ಪ್ರವೇಶ ಪತ್ರ:**

ಒಕ್ಕೂಟವು ಲಿಖಿತ ಪರೀಕ್ಷೆಗೆ ಅರ್ಹವಿರುವ ಅಭ್ಯರ್ಥಿಗಳ ಪಟ್ಟಿಯನ್ನು ಹಾಗೂ ಲಿಖಿತ ಪರೀಕ್ಷೆಯ ದಿನಾಂಕ ಮತ್ತು ವೇಳೆ, ಪರೀಕ್ಷಾ ಕೇಂದ್ರ, ವಿಳಾಸ ಒಳಗೊಂಡು ಲಿಖಿತ ಪ್ರವೇಶ ಪತ್ರವನ್ನು (ಹಾಲ್ ಟಿಕೇಟ್) ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಲಿಖಿತ ಪರೀಕ್ಷೆಗೆ ಹಾಜರಾಗುವ ಸಂದರ್ಭದಲ್ಲಿ ಹಾಜರುಪಡಿಸುವುದು. ಈ ಬಗ್ಗೆ ಮಾಹಿತಿಯನ್ನು ಒಕ್ಕೂಟದ ವೆಬ್‌ಸೈಟ್‌ನಲ್ಲಿ ಖಾತರಿಪಡಿಸಿಕೊಳ್ಳುವುದು ಅಭ್ಯರ್ಥಿಗಳ ಜವಾಬ್ದಾರಿಯಾಗಿರುತ್ತದೆ.

ವಿಜಯಪುರ-ಬಾಗಲಕೋಟ ಸಹಕಾರಿ ಹಾಲು ... ವಿಜಯಪುರ

**ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ:**

1. ಒಕ್ಕೂಟದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳನ್ನು 02 ವರ್ಷ ಪರೀಕ್ಷಾ ಅವಧಿಯಲ್ಲಿ ಇರಿಸಲಾಗುವುದು. ಪರೀಕ್ಷಾವಧಿಯಲ್ಲಿ ತೃಪ್ತಿಕರವಾಗಿ ಕಾರ್ಯನಿರ್ವಹಿಸಿದ ನಂತರ, ಪರೀಕ್ಷಾವಧಿ ಘೋಷಿಸಿ ಖಾಯಂಗೊಳಿಸಲಾಗುವುದು
2. ಒಕ್ಕೂಟದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಒಕ್ಕೂಟದಿಂದ ಯಾವುದೇ ಪಿಂಚಣಿ ಸೌಲಭ್ಯವಿರುವುದಿಲ್ಲ.
3. ಒಕ್ಕೂಟದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳಿಗೆ ಒಕ್ಕೂಟದ ಅನುಮೋದಿತ ಸೇವಾ ನಿಯಮಗಳು ಹಾಗೂ ವೃಂದ ಮತ್ತು ನೇಮಕಾತಿ ನಿಯಮಗಳು ಅನ್ವಯಿಸುತ್ತದೆ.
4. ಒಕ್ಕೂಟದ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳು ನೇಮಕಾತಿ ಪ್ರಕಟಣೆಯಲ್ಲಿ ತಿಳಿಸಿದ ವೇತನ ಶ್ರೇಣಿಯಲ್ಲಿ ಸೇವಾ ಸೌಲಭ್ಯವನ್ನು ಪಡೆಯಲು ಮಾತ್ರ ಅರ್ಹರಾಗಿರುತ್ತಾರೆ.
5. ಆಯ್ಕೆಯಾಗುವ ಅಭ್ಯರ್ಥಿಗಳು ನಿಯೋಜಿಸಿದ ಪಾಳಿಗಳಲ್ಲಿ ಕರ್ತವ್ಯ ನಿರ್ವಹಿಸಲು ಬದ್ಧರಾಗಿರಬೇಕು.
6. ಒಕ್ಕೂಟದ ಹಿತದೃಷ್ಟಿಯಿಂದ ಒಕ್ಕೂಟದ ವ್ಯಾಪ್ತಿಯನ್ನು ಹೊರತುಪಡಿಸಿದ ಯಾವುದೇ ಸ್ಥಳಗಳಿಗೂ ಸಹ ಅಭ್ಯರ್ಥಿಗಳನ್ನು ನಿಯೋಜಿಸಬಹುದಾದ ಹಕ್ಕನ್ನು ವಿಜಯಪುರ ಬಾಗಲಕೋಟೆ ಹಾಲು ಒಕ್ಕೂಟವು ಹೊಂದಿರುತ್ತದೆ.
7. ಪತ್ರಿಕಾ ಪ್ರಕಟಣೆಯಲ್ಲಿ ಹಾಗೂ ಜಾಹೀರಾತಿನಲ್ಲಿ ನಿಗಧಿತ ಹುದ್ದೆ ಮತ್ತು ವೇತನ ಶ್ರೇಣಿಯಲ್ಲಿ ನೇರ ನೇಮಕಾತಿ ಮುಖಾಂತರ ನೇಮಕಗೊಳ್ಳುವ ಪದವಿ/ತಾಂತ್ರಿಕ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಯಾವುದೇ ಅನಾಮಲಿ ವೇತನ ಶ್ರೇಣಿ, ಮರು ನಗದೀಕರಣ, ಹುದ್ದೆ ಹಾಗೂ ಯಾವುದೇ ಆರ್ಥಿಕ ಸೌಲಭ್ಯಕ್ಕೆ ಅವಕಾಶವಿರುವುದಿಲ್ಲ.

**ದುರ್ನಡತೆ:**

ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಸಂದರ್ಶನದಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವವನೆಂದು ಅಥವಾ ಅನುಸರಿಸಲು ಪ್ರಯತ್ನಿಸುತ್ತಿರುವವನೆಂದು ಅಥವಾ ಅವರ ನೇಮಕಾತಿ ಸಂಧರ್ಭದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸುವನೆಂದು ಕಂಡು ಬಂದಲ್ಲಿ, ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಸಂದರ್ಶನದಿಂದ/ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. ಇಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ನೇಮಕಾತಿ ಪ್ರಕ್ರಿಯೆಗಳ ಸಂದರ್ಭದಲ್ಲಿ ಅಥವಾ ನೇಮಕಾತಿಯ ನಂತರವು ಖಾಯಂ ಆಗಿ ಡಿಬಾರ್ ಮಾಡಲಾಗುವುದು.

**ನಿರ್ಬಂಧ:**

1. ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯನಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಸ್ಥೆಯ ಕಾರ್ಯ ಚಟುವಟಿಕೆಯಲ್ಲಿ ಸಕ್ರೀಯವಾಗಿ ಭಾಗವಹಿಸಿದ್ದಲ್ಲಿ,
2. ಭಾರತ ಸಂವಿಧಾನಕ್ಕೆ ಚ್ಯುತಿ ತರುವ ಕಾರ್ಯದಲ್ಲಿ ಪ್ರವೃತ್ತನಾದಲ್ಲಿ,
3. ಕಾನೂನು ಭಂಗ ಮಾಡಿ ಹಿಂಸಾಕೃತ್ಯದಲ್ಲಿ ತೊಡಗಿಸಿಕೊಂಡಿದ್ದಲ್ಲಿ,
4. ಭಾರತ ದೇಶದ ಸಾರ್ವಭೌಮ ಹಾಗೂ ಸುಭದ್ರತೆಗೆ ಧಕ್ಕೆ ತರುವ ಕಾರ್ಯದಲ್ಲಿ ತೊಡಗಿಕೊಂಡಿದ್ದಲ್ಲಿ,
5. ಭಾರತ ಸರ್ಕಾರದ ಅಥವಾ ಯಾವುದೇ ರಾಜ್ಯ ಸರ್ಕಾರದ ಸೇವೆಯಿಂದ ಉಚ್ಚಾಟನೆಗೊಂಡಿದ್ದಲ್ಲಿ,
6. ವ್ಯಕ್ತಿಯು ನ್ಯಾಯಬಾಹೀರ ಕೃತ್ಯಗಳಲ್ಲಿ ತೊಡಗಿ ಅಪರಾಧಕ್ಕೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಹೆಂಡತಿ ಇರುವ ವ್ಯಕ್ತಿಯನ್ನು ವಿವಾಹವಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಿರುವುದಿಲ್ಲ.
7. ಮಾನಸಿಕ ಅಸ್ವಸ್ಥತೆ / ಖಿನ್ನತೆಗೆ ಒಳಗಾಗಿದ್ದರೆ.
8. ಸಕ್ಷಮ ನ್ಯಾಯಾಲಯದಿಂದ ದಿವಾಳಿಯೆಂದು ಘೋಷಿಸಲ್ಪಟ್ಟ ವ್ಯಕ್ತಿ ಅಥವಾ ಅನಮ್ಮುಕ್ತ ದಿವಾಳಿ ಆಗಿದ್ದರೆ.
9. ವೈದ್ಯಕೀಯವಾಗಿ ಅನರ್ಹನೆಂದು ಪರಿಗಣಿಸಲಾಗಿದ್ದರೆ / ಪರಿಗಣಿಸಲಾದರೆ.
10. ಯಾವುದೇ ಅಭ್ಯರ್ಥಿಯು ತನ್ನ ನೇಮಕಾತಿಗಾಗಿ ಅಧಿಕಾರಿಗಳ/ಅಧಿಕಾರೇತರ ಹೊರಗಿನ ಬೆಂಬಲವನ್ನು ಯಾವುದೇ ರೀತಿಯಲ್ಲಿ ಪ್ರಯತ್ನಪಟ್ಟಿರುವುದು ಕಂಡುಬಂದಲ್ಲಿ, ಆತನು ಒಕ್ಕೂಟದ ನೇಮಕಾತಿಗೆ / ಸೇವೆಗೆ ಸೇರಲು ಅವಕಾಶವಿರತಕ್ಕದ್ದಲ್ಲ.

**ಸಾಮಾನ್ಯ ನಿಬಂಧನೆಗಳು:–**

1) ಕನ್ನಡವನ್ನು ಓದುವ ಸಾಮರ್ಥ್ಯದ ಜೊತೆ ಕನ್ನಡದ ಜ್ಞಾನ, ಬರೆಯುವಿಕೆ, ಕನ್ನಡವನ್ನು ಸ್ವಚ್ಛವಾಗಿ ಮಾತನಾಡುವುದು ಮತ್ತು ಅರ್ಥ ಮಾಡಿಕೊಳ್ಳುವುದು ಕಡ್ಡಾಯವಾಗಿರುತ್ತದೆ.
2) ಆಯ್ಕೆಯಾದ ಅಭ್ಯರ್ಥಿಗಳನ್ನು ಒಕ್ಕೂಟದ ವ್ಯಾಪ್ತಿಯಲ್ಲಿನ ಕಛೇರಿ, ಶೀತಲ ಕೇಂದ್ರಗಳಿಗೆ, ಇತರೇ ಘಟಕಗಳಿಗೆ ವರ್ಗಾವಣೆ ಮಾಡಲು ಅವಕಾಶವಿರುತ್ತದೆ.
3) ಈ ನೇಮಕಾತಿ ಪ್ರಕಟಣೆಯನ್ನು ಅನಿವಾರ್ಯ ಕಾರಣಗಳಿಂದ ಹಿಂದಕ್ಕೆ ಪಡೆಯುವ/ರದ್ದುಪಡಿಸುವ/ತಡೆಹಿಡಿಯುವ/ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ ನೀಡದೆ ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ/ರದ್ದುಪಡಿಸುವ ಅಧಿಕಾರವನ್ನು ಒಕ್ಕೂಟವು ಕಾಯ್ದಿರಿಸಿಕೊಂಡಿರುತ್ತದೆ. ಹಾಗೂ ಈ ನೇಮಕಾತಿಗೆ ಸಂಬಂಧಿಸಿದಂತೆ ನೇಮಕಾತಿ ಪ್ರಾಧಿಕಾರವು ಅಗತ್ಯತೆಯಂತೆ ಹುದ್ದೆಗಳನ್ನು ಹೆಚ್ಚು ಅಥವಾ ಕಡಿಮೆ ಮಾಡುವ ಅಧಿಕಾರವನ್ನು ಹೊಂದಿರುತ್ತದೆ. ಈ ನೇಮಕಾತಿ ಪ್ರಕ್ರಿಯೆಯನ್ನು ರದ್ದುಪಡಿಸಿದ ಸಂದರ್ಭದಲ್ಲಿ ಅರ್ಜಿ ಶುಲ್ಕವನ್ನು ವಾಪಸ್ಸು ಮಾಡಲಾಗುವುದಿಲ್ಲ ಅಥವಾ ಇನ್ನಾವುದೇ ನೇಮಕಾತಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದಿಲ್ಲ. ಮೇಲಿನ ಎಲ್ಲಾ ಹುದ್ದೆಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳು ಒಕ್ಕೂಟವು ನಿಗದಿಪಡಿಸುವ 3 ಪಾಳೆಗಳಲ್ಲಿ (ಬೆಳಿಗ್ಗೆ, ಮಧ್ಯಾಹ್ನ ಮತ್ತು ರಾತ್ರಿ) ಕಡ್ಡಾಯವಾಗಿ ಕಾರ್ಯ ನಿರ್ವಹಿಸಲು ಬದ್ಧನಾಗಿರಬೇಕು.

**ವಿಶೇಷ ಸೂಚನೆ :**

4) ನೇಮಕಾತಿಗೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ 10 am – 5 pm ರೊಳಗಾಗಿ (ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ) ಸಂಚಾರಿ ದೂರವಾಣಿ ಸಂಖ್ಯೆ: **8884441398** / **8884447318** ಗಳಿಗೆ ಸಂಪರ್ಕಿಸಬಹುದಾಗಿದೆ.

ವ್ಯವಸ್ಥಾಪಕ ನಿರ್ದೇಶಕರು
ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ಸಹಕಾರ ಹಾಲು ಉತ್ಪಾದಕರ
ಸಂಘಗಳ ಒಕ್ಕೂಟ ನಿ., ವಿಜಯಪುರ.

ವಿಜಯಪುರ

## ಅನುಬಂಧ

(ಪ.ಜಾ/ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ–ಡಿ**

(ನಿಯಮ 3ಎ (2)(3) ನೋಡಿ)

**ಅನೂಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ/ಪ.ಪಂ)ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ**

**ಪ್ರಮಾಣ ಪತ್ರ**

_______________ರಾಜ್ಯದ / ಕೇಂದ್ರಾಡಳಿತ ಪ್ರದೇಶದ * _______________ ಜಿಲ್ಲೆಯ / ವಿಭಾಗದ _______________ ಗ್ರಾಮದ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ _______________ ಎಂಬವರ ಮಗ / ಮಗಳಾದ ಶ್ರೀ / ಶ್ರೀಮತಿ ___________ ಇವರು ಅನುಸೂಚಿತ ಜಾತಿ/ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ/ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣಿಕರಿಸಿದೆ.

- ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950.
- ಸಂವಿಧಾನ (ಅನುಸೂಚಿತ ಜಾತಿಗಳು)(ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950.

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ತಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971 ರ ಮೂಲ ತಿದ್ದುಪಡಿಯಾದಂತೆ)

- ಸಂವಿಧಾನ
- ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956.
- ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ 1976ರ ಮೂಲಕ. ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
- ಸಂವಿಧಾನ (ದಾದರ ಮತ್ತು ನಾಗರಹವೇಲಿ) ಅನುಸೂಚಿತ ಜಾತಿಗಳ ಆದೇಶ 1962.
- ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964.
- ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967.
- ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ 1988.
- ಸಂವಿಧಾನ (ನಾಗಾಲ್ಯಾಂಡ) ಅನುಸೂಚಿತ ಬುಡಕಟ್ಟುಗಳ ಆದೇಶ.

2. ಶ್ರೀ/ಶ್ರೀಮತಿ/ಕುಮಾರಿ * _______________ ಮತ್ತು / ಅಥವಾ ಅವನ* /ಅವಳ* ಕುಟುಂಬವು _______________ ರಾಜ್ಯ / ಕೇಂದ್ರಾಡಳಿತ ಪ್ರದೇಶದ _______________ ಜಿಲ್ಲಾ / ವಿಭಾಗದ _______________ ಗ್ರಾಮ/ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ

_______________

ತಹಶೀಲ್ದಾರ

_______________

ಸ್ಥಳ:

ಪದನಾಮ

ದಿನಾಂಕ:

ಕಚೇರಿಯ ಮೊಹರಿನೊಂದಿಗೆ

**ನಮೂನೆ–ಇ**

**(ನಿಯಮ 3ಎ (2) (3) ನೋಡಿ)**

**ಹಿಂದುಳಿದ ವರ್ಗಗಳಿಗೆ (ಪ್ರ ವರ್ಗ–1) ಸೇರಿದ ಅಭ್ಯರ್ಥಿಗಳಿಗೆ ಮಾತ್ರ ನೀಡುವ ಪ್ರಮಾಣ ಪತ್ರ**

______________________ ಗ್ರಾಮದ / ಪಟ್ಟಣದ /ನಗರ ನಿವಾಸಿಯಾದ ಶ್ರೀ/ಶ್ರೀಮತಿ ______________ ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ ______________ ಇವರು ಹಿಂದುಳಿದ ವರ್ಗಗಳ (ಪ್ರವರ್ಗ) ______________ ಜಾತಿಯ ______________ ಉಪಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ:

ತಹಶೀಲ್ದಾರ________

__________ ತಾಲ್ಲೂಕು

ಕಚೇರಿಯ ಮೊಹರಿನೊಂದಿಗೆ

(ಪ್ರ ವರ್ಗ–2ಎ, 2ಬಿ, 3ಎ, 3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

**ನಮೂನೆ–ಎಫ್**

(ನಿಯಮ 3ಎ (2) (3) ನೋಡಿ)

**ಹಿಂದೂಳಿದ ವರ್ಗಗಳಿಗೆ (ಪ್ರವರ್ಗ–2ಎ, 2ಬಿ, 3ಎ, 3ಬಿ) ವರ್ಗಕ್ಕೆ ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಪ್ರಮಾಣ ಪತ್ರ**

____________________ ರಲ್ಲಿ ವಾಸವಾಗಿರುವ ಶ್ರೀ/ಶ್ರೀಮತಿ ____________________ ಇವರ ಮಗ/ಮಗಳು/ಪತಿ/ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ ____________________ ಇವರ ಮತ್ತು ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಸರ್ಕಾರಿ ಆದೇಶಗಳ ಸಂಖ್ಯೆ ಎಸ್.ಡಬ್ಲ್ಯೂ.ಡಿ225 ಬಿಸಿಎ 2000 ದಿನಾಂಕ 30–3–2002 ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು

ಅಭ್ಯರ್ಥಿಯಾಗಲಿ ಅಥವಾ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಯಾಗಲಿ ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2 ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನ ಹುದ್ದೆಯನ್ನು ಹೊಂದಿರುವುದಿಲ್ಲ

ಅಥವಾ

ಖಾಸಗಿ ನಿಯೋಜಕರ ಕೆಳಗೆ 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ ಕಡಿಮೆ ಇಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ತಂದೆ/ತಾಯಿ/ಪೋಷಕರ/ಪತಿ/ಪತ್ನಿಯ ಆದಾಯವು ರೂ. 8 ಲಕ್ಷ ಮೀರುವುದಿಲ್ಲವೆಂದು

ಅಥವಾ

ಕರ್ನಾಟಕ ಭೂ–ಸುದಾರಣಾ ಅಧಿನಿಯಮ 1961 ರಲ್ಲಿ ನಿಗದಿಪಡಿಸಿರುವಂತೆ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ ತಂದೆ/ತಾಯಿ/ಪೋಷಕರ/ಪತಿ/ಪತ್ನಿಯು ಅಥವಾ ಇವರಿಬ್ಬರು 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಷನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ. ಸರ್ಕಾರಿ ಆದೇಶಗಳ ಸಂಖ್ಯೆ ಎಸ್.ಡಬ್ಲ್ಯೂ.ಡಿ225 ಬಿಸಿಎ 2000 ದಿನಾಂಕ 30–03–2002 ರನ್ವಯ ಹಿಂದುಳಿದ ಪ್ರವರ್ಗ ________ (2ಎ, 2ಬಿ, 3ಎ, 3ಬಿ) ಕ್ಕೆ ಸೇರಿರುತ್ತಾರೆ.

ಸ್ಥಳ: ____________ ತಹಶೀಲ್ದಾರ

ದಿನಾಂಕ: ಪದನಾಮ

ಕಚೇರಿಯ ಮೊಹರಿನೊಂದಿಗೆ

**<u>ಸೂಚನೆ:</u>**

1. ಸರ್ಕಾರದ ಆದೇಶದ ಸಂಖ್ಯೆ ಹಿಂವಕ 304 ಬಿಸಿಎ 2017 ದಿನಾಂಕ 14–09–2018 ರಂತೆ ಹಿಂದುಳಿದ ವರ್ಗಗಳ ಪ್ರವರ್ಗ–2ಎ, 2ಬಿ, 3ಎ, 3ಬಿ ಮೀಸಲಾತಿಗಳಿಗೆ ಅನ್ವಯಿಸುವಂತೆ ನಿಗದಿಪಡಿಸಿರುವ ಅಭ್ಯರ್ಥಿಯ ಮತ್ತು ಅವರ /ತಂದೆ/ತಾಯಿ/ಪೋಷಕರ/ಪತಿ/ಪತ್ನಿಯ ವಾರ್ಷಿಕ ಒಟ್ಟು ಆದಾಯ ಮಿತಿಯನ್ನು (Gross annual income) ರೂ 8.00 ಲಕ್ಷಗಳಿಗೆ ಹೆಚ್ಚಿಸಲಾಗಿದೆ. ಆದುದರಿಂದ ಮೀಸಲಾತಿ ಪ್ರಮಾಣ ಪತ್ರವನ್ನು ನೀಡುವ ಅಧಿಕೃತ ಅಧಿಕಾರಿಯು ದಿನಾಂಕ 14–09–2018 ರ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ವಿವರವಾಗಿ ಖಚಿತ ಪಡಿಸಿಕೊಂಡ ನಂತರವೇ ನೀಡತಕ್ಕದ್ದು.
2. ಈ ಮೇಲೆ ಹೇಳಲಾದ ಸರ್ಕಾರಿ ಆದೇಶದಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಸದರಿ ಮೀಸಲಾತಿಯನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು ಅದರಂತೆ ಜಾತಿ/ಮೀಸಲಾತಿ/ಪ್ರಮಾಣ ಪತ್ರಗಳ ಮಾಡಿಸಲು ಸೂಚಿಸಿದೆ.

ವಿಜಯಪುರ

## ನಮೂನೆ- 1

## ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

**ಇವರಿಗೆ,**
ತಹಶೀಲ್ದಾರರು,
___________ ತಾಲ್ಲೂಕು
___________ ಜಿಲ್ಲೆ

ಮಾನ್ಯರೆ,

ಶ್ರೀ / ಶ್ರೀಮತಿ ____________________________ ಎಂಬುವರ ಮಗ / ಮಗಳು / ಪತಿ / ಪತ್ನಿ ________________________ ಆದ ನಾನು ಮೇಲುಸ್ತರದಲ್ಲಿ () ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಯನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಮತ್ತು ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ :
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರು (ತಂದೆ/ತಾಯಿ ಜೀವಂತವಿಲ್ಲದಿದ್ದರೆ)
   ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ:
   1) ವೇತನ ಶ್ರೇಣಿ
   2) ಜಮೀನಿನ ವಿವರ
   3) ಇತರೆ ಮೂಲಗಳು
9. ಆದಾಯ ತೆರಿಗೆ ಪಾವತಿದಾರರೇ ?
10. ಸಂಪತ್ತು ತೆರಿಗೆ ಪಾವತಿದಾರರೇ ?
11. ಮಾರಾಟ ತೆರಿಗೆ ಪಾವತಿದಾರರೇ ?

## (ಪ್ರಮಾಣೀಕೃತ ಘೋಷಣೆ)

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ಧೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ: ತಮ್ಮ ವಿಧೇಯ

ದಿನಾಂಕ: (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣಿಕರಿಸುತ್ತಾ, ಈ ಮಾಹಿತಿಗಳು ಅಸತ್ಯವೆಂದು ಧೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ದನಾಗಿರುತ್ತೇನೆ.

ಸ್ಥಳ: ತಂದೆ/ತಾಯಿ/ಪೋಷಕರ ಸಹಿ.

ದಿನಾಂಕ: ತಂದೆ/ತಾಯಿ/ಪೋಷಕರು

ಜೀವಂತವಿಲ್ಲದಿದ್ದಲ್ಲಿ

(ಹೆಂಡತಿ/ಗಂಡ ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಇವರನ್ನು ಹಾಗೂ ಇಅವರ ಸಹಿಯನ್ನು ಗುರುತಿಸುತ್ತೇನೆ.

ಸಾಕ್ಷಿದಾರರ ಸಹಿ

(ಪೂರ್ಣ ವಿಳಾಸದೊಂದಿಗೆ)

1)

2)

## ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ ____________________ ಎಂಬುವವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ ____________ ಎಂಬುವವರು ಕರ್ನಾಟಕ ರಾಜ್ಯದ ____________ ಜಿಲ್ಲೆಯ ವಿಭಾಗ ________ ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ. ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.
2. ಶ್ರೀ/ಶ್ರೀಮತಿ/ಕುಮಾರಿ __________ ಇವರ ತಂದೆ/ತಾಯಿ/ಪೋಷಕರ/ಪತಿ/ಪತ್ನಿ ಇವರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಬ್ಲುಡಿ/251/ಬಿ.ಸಿ.ಎ/94, ಬೆಂಗಳೂರು, ದಿನಾಂಕ 31-01-1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy layer) ಬರುವುದಿಲ್ಲವೆಂದು ಪ್ರಮಾಣಿಕರಿಸಲಾಗಿದೆ.

ಸ್ಥಳ: ತಹಶೀಲ್ದಾರ

ದಿನಾಂಕ: __________ ತಾಲೂಕು

ಕಚೇರಿಯ ಮೊಹರಿನೊಂದಿಗೆ

**ಸೂಚನೆ:**

1. ಇದರಲ್ಲಿ ಉಪಯೋಗಿಸಲಾದ "ಸಾಮಾನ್ಯ ನಿವಾಸಿ" ಎಂಬ ಪದವು 1950 ರಿಂದ ಜನತಾ ಪ್ರಾತಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.
2. ಪರಿಶೀಲನಾ ಪ್ರಮಾಣಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್.ಡಬ್ಲ್ಯೂಡಿ 251/ಬಿ.ಸಿ.ಎ/94, ಬೆಂಗಳೂರು, ದಿನಾಂಕ 31-01-1995 ರನ್ವಯ ಮೇಲುಸ್ತರದಲ್ಲಿ (Creamy layer) ರವರನ್ನು ಗುರುತಿಸಲು ನಿಗಧಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

**ನಮೂನೆ–2**

**ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ**

ಶ್ರೀ/ಶ್ರೀಮತಿ ____________________ ರವರ ಮಗ/ಮಗಳು/ಪತಿ/ಪತ್ನಿ ಶ್ರೀ/ಶ್ರೀಮತಿ/ಕುಮಾರಿ ________________ ಇಲ್ಲಿ ______________ ತಾಲೂಕು ____________ ಗ್ರಾಮದಲ್ಲಿ __________ ವಾಸವಾಗಿರುವ ಇವರು ಒಂದನೇ ತರಗತಿಯಿಂದ ____________ ತರಗತಿಯವರೆಗೆ _____________ ಇಲ್ಲಿ ____________ ತಾಲೂಕು ___________ ಪಟ್ಟಣ ____________________ ಶಾಲೆಯಲ್ಲಿ ವ್ಯಾಸಾಂಗ ಮಾಡಿ ________________ ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯ ಅಭ್ಯರ್ಥಿಯು ವ್ಯಾಸಾಂಗ ಮಾಡಿದ ಅವಧಿಯಲ್ಲಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ 1964 ರ ಅಡಿಯಲ್ಲಿ ನಿರ್ಧಿಷ್ಠ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸಹಿ/–

ಮೇಲು ರುಜು ಕ್ಷೇತ್ರ ಶಿಕ್ಷಣ ಅಧಿಕಾರಿ

ಮುಖ್ಯೋಪಾಧ್ಯಾಯರ ಸಹಿ ಮತ್ತು ಕಚೇರಿಯ ಮೊಹರು

ಸಂಸ್ಥೆಯ ಮೊಹರು

ಸ್ಥಳ:

ದಿನಾಂಕ:

<u>**ಕನ್ನಡ ಮಾಧ್ಯಮ ವ್ಯಾಸಂಗ ಪ್ರಮಾಣ ಪತ್ರ**</u>

ಶ್ರೀ/ಶ್ರೀಮತಿ ______________________ ರವರ

ಮಗ/ಮಗಳು/ಪತಿ/ಪತ್ನಿ/ಶ್ರೀಮತಿ/ಕುಮಾರಿ ______________________

______________ ಜಿಲ್ಲೆ ______________ ತಾಲ್ಲೂಕು ______________

ಗ್ರಾಮದಲ್ಲಿ ವಾಸವಾಗಿರುವ ಇವರು ______________ ನೇ ತರಗತಿಯಿಂದ ______________ ನೇ ತರಗತಿವರೆಗೆ ______________ ಶೈಕ್ಷಣಿಕ ವರ್ಷದವರೆಗೆ ______________ ಶೈಕ್ಷಣಿಕ ವರ್ಷದವರೆಗೆ ______________ ಶಾಲೆಯಲ್ಲಿ ಕನ್ನಡ ಮಾಧ್ಯಮದಲ್ಲಿ ವ್ಯಾಸಾಂಗ ಮಾಡಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ:

ದಿನಾಂಕ: ಮುಖ್ಯೋಪಾಧ್ಯಾಯರ ಸಹಿ ಮತ್ತು ಸಂಸ್ಥೆಯ ಮೊಹರು

ಸರ್ಕಾರದ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೆನೆನಿ 2005, ದಿನಾಂಕ 19–11–2005.

## CERTIFICATE FOR THE PERSONS WITH DISABILITIES

This is to certify that Sri/Smt/Kum ____________________________ son/wife/daughter of Shri __________________ Age _______ old, male/female, Registration No _____________ is a case pf _________ He/She is physically disabled/visual disabled/speech and hearing disabled and has __________ % ( ______________% )

Permanent (physical imapairment visual impairment speech & hearing impairment) in relation his/her _______________

Note:

1. This condition is progressive/non- progressive/likely to improve/not likely to improve.
2. Re assessment is not recommended/is recommended of ____________ monthly/years Strike out which is not applicable.

(Recent attested
photograph
showing the dis-ability affixed
here.)

Orthopidie/Eye
ENT/Phychiatrist
Member,
Medical Board

Senior
Specialist
Member
Medical Board

Chariperson
District Surgeon
District Hospital

## GOVERNMENT OF KARNATAKA

## DEPARTMENT OF SAINIK WELFARE & RESETTLEMENT

Office of Deputy Director, Dapartment Sainik Welfare & Resettlement (Karnataka)

No____________________________

Date_________________________

## CERTIFICATE

This is to certify that Sri/Smt/Kum _____________________________________________ is an applicant for ______________ is the spouse/son/daughter of No _____________ Rank ___________ Name ______________________ of Army/Navy/Air Force, who is an Ex-Serviceman according to the definition laid down by the ministry of Defence, Government of India. He served from ____________- to__________________

The Ex-Servismen has declared his home town in Karnataka at the time of entry into service as per records and hence eligible to avail reserved seats under Ex-Serviceman quota. His permanent home address at the time entry into service was as under.

_______________________________________

________________________________________

Signature of Deputy Director,

Dapartment Sainik welfare and Re-Settlement

__________________ District.

**ಪ್ರಸ್ತುತ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅಭ್ಯರ್ಥಿಗಳು ನೇಮಕಾತಿ ಪ್ರಾಧಿಕಾರಿಗಳಿಂದ ಪಡೆಯಬೇಕಾದ ನಿರಾಕ್ಷೇಪಣಾ/ಅನುಮತಿ ಪ್ರಮಾಣ ಪತ್ರ.**

ಶ್ರೀ/ಶ್ರೀಮತಿ ______________________ ಇವರ ತಂದೆ ______________ ಇವರು ______________ ದಿನಾಂಕ ______________________ ರಿಂದ __________________________ ಸಂಸ್ಥೆಯಲ್ಲಿ ________________________ ಹುದ್ದೆಯಲ್ಲಿ ಖಾಯಂ/ಹಂಗಾಮಿಯಾಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲಾ ಸಹಕಾರ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿ., ವಿಜಯಪುರ ನೇಮಕಾತಿ ಅಧಿಸೂಚನೆಯಂತೆ ಆಹ್ವಾನಿಸಿರುವ ______________________ ಹುದ್ದೆಗೆ ಅರ್ಜಿ ಸಲ್ಲಿಸಲು ಈ ಸಂಸ್ಥೆ/ಇಲಾಖೆಯಿಂದ ಯಾವುದೇ ಆಕ್ಷೇಪಣೆ ಇರುವುದಿಲ್ಲ.

ಪ್ರಸ್ತುತ ನೇಮಕಾತಿ ಪ್ರಾಧಿಕಾರಿಗಳು

ಪದನಾಮ

ಮೊಹರು